# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 'ಹಳ್ಳಿ ಸಂತೆ' ಯೋಜನೆಯಡಿ ಮಾರುಕಟ್ಟೆ ನಿರ್ಮಾಣ ಮಾಡಲು ಮಂಜೂರು ಮಾಡುವ ಬಗ್ಗೆ.

ಓದಲಾಗಿದೆ:
1) 2016-17 ನೇ ಸಾಲಿನ ಆಯವ್ಯಯ ಘೋಷಣೆಯ ಕ್ರಮ ಸಂಖ್ಯೆ 278
2) ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 389 ಗ್ರಾಪಂಅ 2016(ಭಾಗ-3), ಬೆಂಗಳೂರು, ದಿನಾಂಕ 20.01.2017.
3) ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 1111 ಗ್ರಾಪಂಅ 2016, ಬೆಂಗಳೂರು, ದಿನಾಂಕ 29.08.2017.
4) ಇದೇ ಸಮಸಂಖ್ಯೆ ಆದೇಶ, ದಿನಾಂಕ 21.08.2017.
5) ಸರ್ಕಾರದಲ್ಲಿ ಸ್ವೀಕೃತಗೊಂಡಿರುವ ಮನವಿಗಳ ದಿನಾಂಕ 13.09.2017, 15.09.2017 ಮತ್ತು 16.09.2017.

***

ಮೇಲೆ ಓದಲಾದ (1) ರಲ್ಲಿ 500 ದೊಡ್ಡ ಗ್ರಾಮ ಪಂಚಾಯತಿಗಳಲ್ಲಿ 'ಹಳ್ಳಿ ಸಂತೆ' ಏರ್ಪಡಿಸಲು ವಿಲೇಜ್ ಹಾತ್ ಮಾದರಿಯಲ್ಲಿ ರೂ. 25 ಕೋಟಿಗಳ ಅಂದಾಜು ಮೊತ್ತದಲ್ಲಿ ಮಾರುಕಟ್ಟೆಗಳನ್ನು ನಿರ್ಮಿಸಲು ಹಾಗೂ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಅವಕಾಶ ಕಲ್ಪಿಸಲಾಗಿದೆ.

ಮೇಲೆ ಓದಲಾದ (2) ಮತ್ತು (4) ರಲ್ಲಿ 'ಹಳ್ಳಿ ಸಂತೆ' ಯೋಜನೆಯಡಿ ಮಾರುಕಟ್ಟೆಗಳನ್ನು ನಿರ್ಮಿಸಲು ಮಂಜೂರಾತಿ ನೀಡಲಾಗಿದ್ದು, ಅನುಷ್ಠಾನ ಏಜೆನ್ಸಿಯಾಗಿ ಕರ್ನಾಟಕ ರಾಜ್ಯ ಗ್ರಾಮೀಣ ಮೂಲಸೌಕರ್ಯ ಅಭಿವೃದ್ಧಿ ಸಂಸ್ಥೆ(ಕೆ.ಆರ್.ಐ.ಡಿ.ಎಲ್.), ಬೆಂಗಳೂರು ಇವರನ್ನು ಆಯ್ಕೆ ಮಾಡಲಾಗಿದೆ.

ಮೇಲೆ ಓದಲಾದ (3) ರಲ್ಲಿ 'ಹಳ್ಳಿ ಸಂತೆ' ಯೋಜನೆಯಡಿ ಮಾರುಕಟ್ಟೆ ಕಟ್ಟಡ ಹಾಗೂ ಪ್ರಾಂಗಣವನ್ನು ನಿರ್ಮಿಸಲು ಕೆ.ಆರ್.ಐ.ಡಿ.ಎಲ್. ಸಂಸ್ಥೆಯು ಒಂದು ಮಾರುಕಟ್ಟೆಗೆ ರೂ. 31.50 ಲಕ್ಷಗಳ ಅಂದಾಜು ವೆಚ್ಚ ನೀಡಿದ್ದು, ನಂತರ ಮಾರುಕಟ್ಟೆ ಪ್ರಾಂಗಣದ ಪುನರ್ ವಿನ್ಯಾಸಗೊಳಿಸಿ ಕುಡಿಯುವ ನೀರು, ಶೌಚಾಲಯ, ತರಕಾರಿ ಸ್ವಚ್ಛಗೊಳಿಸುವ ವ್ಯವಸ್ಥೆ ಸೇರ್ಪಡೆ ಮಾಡಿ ಪುನರ್ ರಚಿತ ರೂ. 33.60 ಲಕ್ಷಗಳು ಅಂದಾಜು ವೆಚ್ಚ ಹಾಗೂ ವಿನ್ಯಾಸಕ್ಕೆ ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಿದೆ.

ಮೇಲೆ ಓದಲಾದ (5) ರಲ್ಲಿನ ಮನವಿಗಳನ್ನು ಪರಿಶೀಲಿಸಲಾಗಿ, ಅದರಲ್ಲಿ ಗದಗ ಜಿಲ್ಲೆ, ಗದಗ ತಾಲ್ಲೂಕಿನ ಕೋಟುಮಚಗಿ ಮತ್ತು ಬಳಗಾನೂರ ಗ್ರಾಮಗಳು, ಶಿರಹಟ್ಟಿ ತಾಲ್ಲೂಕಿನ ಆದ್ರಳ್ಳಿ ಗ್ರಾಮ ಹಾಗೂ ನರಗುಂದ ತಾಲ್ಲೂಕಿನ ಕೊಣ್ಣುರ ಗ್ರಾಮಗಳನ್ನು 'ಹಳ್ಳಿ ಸಂತೆ' ಯೋಜನೆಯಡಿ ಮಾರುಕಟ್ಟೆ ನಿರ್ಮಾಣ ಮಾಡಲು ಸರ್ಕಾರವು ನಿರ್ಣಯಿಸಿದೆ. ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 879 ಗ್ರಾಪಂಅ 2017, ಬೆಂಗಳೂರು, ದಿನಾಂಕ: 31.10.2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಈ ಕೆಳಕಂಡ ಗ್ರಾಮಗಳಲ್ಲಿ 'ಹಳ್ಳಿ ಸಂತೆ' ಯೋಜನೆಯಡಿ ಮಾರುಕಟ್ಟೆ ನಿರ್ಮಾಣ ಮಾಡಲು ಮಂಜೂರಾತಿ ನೀಡಿದೆ.

| ಕ್ರ.ಸಂ. | ಜಿಲ್ಲೆ | ತಾಲ್ಲೂಕು | ಗ್ರಾಮ |
|---|---|---|---|
| 01 | ಗದಗ | ಗದಗ | ಕೋಟುಮಚಗಿ |
| 02 | ಗದಗ | ಗದಗ | ಬಳಗಾನೂರ |
| 03 | ಗದಗ | ಶಿರಹಟ್ಟಿ | ಆದ್ರಳ್ಳಿ |
| 04 | ಗದಗ | ನರಗುಂದ | ಕೊಣ್ಣುರ |

ಸದರಿ ಯೋಜನೆಯ ಬಗ್ಗೆ ದಿನಾಂಕ 06.07.2016 ರಲ್ಲಿ ಹೊರಡಿಸಿರುವ ಮಾರ್ಗಸೂಚಿಗಳನ್ವಯ ಅನುಷ್ಠಾನಗೊಳಿಸಲು ಅನುಷ್ಠಾನ ಏಜೆನ್ಸಿಯಾಗಿ ಕರ್ನಾಟಕ ರಾಜ್ಯ ಗ್ರಾಮೀಣ ಮೂಲಸೌಕರ್ಯ ಅಭಿವೃದ್ಧಿ ಸಂಸ್ಥೆ(ಕೆ.ಆರ್.ಐ.ಡಿ.ಎಲ್.), ಬೆಂಗಳೂರು ಇವರಿಗೆ ಸೂಚಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಇವರಿಗೆ:**

1) ಮಹಾಲೇಖಪಾಲರು, ಕರ್ನಾಟಕ ವೃತ್ತ, ಬೆಂಗಳೂರು.
2) ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
3) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಗ್ರಾಮೀಣ ಮೂಲಸೌಕರ್ಯ ಅಭಿವೃದ್ಧಿ ಸಂಸ್ಥೆ(ಕೆ.ಆರ್.ಐ.ಡಿ.ಎಲ್.), ಬೆಂಗಳೂರು.
4) ಆಯುಕ್ತರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ.
5) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತಿ, ಗದಗ.
6) ನಿರ್ದೇಶಕರು(ಪಂ.ರಾಜ್-2), ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ.
7) ನಿರ್ದೇಶಕರು(ಗ್ರಾ.ಮೂ.ಸೌ.), ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ
8) ಅಧೀನ ಕಾರ್ಯದರ್ಶಿ(ಪ್ರ), ಆರ್ಥಿಕ ಇಲಾಖೆ, ವೆಚ್ಚ-5, ವಿಧಾನ ಸೌಧ, ಬೆಂಗಳೂರು.
9) ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ.
10) ನಿರ್ದೇಶಕರು(ಯೋ.ಉ.ಮಾ.), ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ.
11) ನಿರ್ದೇಶಕರು, ಎ.ಎನ್.ಎಸ್.ಎಸ್.ಐ.ಆರ್.ಡಿ., ಮೈಸೂರು.
12) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಗದಗ, ಶಿರಹಟ್ಟಿ ಹಾಗೂ ನರಗುಂದ.
13) ಪಂಚಾಯತಿ ಅಭಿವೃದ್ಧಿ ಅಧಿಕಾರಿ. ಕೋಟುಮಚಗಿ, ಬಳಗಾನೂರ, ಆದ್ರಳ್ಳಿ ಹಾಗೂ ಕೊಣ್ಣುರ ಗ್ರಾಮ ಪಂಚಾಯತಿ.
14) ಸಂಪಾದಕರು, ಕರ್ನಾಟಕ ವಿಕಾಸ – ಪ್ರಕಟಣೆಗಾಗಿ.
15) ಗಣಕಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
16) ಹೆಚ್ಚುವರಿ ಪ್ರತಿ/ಶಾಖಾ ರಕ್ಷಕ ಕಡತ.

**ಪ್ರತಿಯನ್ನು ಮಾಹಿತಿಗಾಗಿ:**

1) ಮಾನ್ಯ ಗ್ರಾ.ಅ. ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ.
2) ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾ.ಅ. & ಪಂ.ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.